# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ,ಧಾರವಾಡ, ಕಾರವಾರ, ವಿಜಯಪುರ,ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:18/ಸಂಚಿಕೆ: 144 RNI NO.KAR KAN/2003/10452:No.G2/PMG/KA/NK/743/18-20 ಮಂಗಳವಾರ ದಿನಾಂಕ: 12-05-2020 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com

## ಮೊಬೈಲ್ ಫೀವರ್ ಕ್ಲಿನಿಕ್‌ಗೆ ಚಾಲನೆ ನೀಡಿದ ಸಿಎಂ

ಬೆಂಗಳೂರು,ಮೇ 11- ಗೃಹ ಕಚೇರಿ ಕೃಷ್ಣಾದಲ್ಲಿ ಮೊಬೈಲ್ ಫೀವರ್ ಕ್ಲಿನಿಕ್‌ಗೆ ಮುಖ್ಯಮಂತ್ರಿ ಯಡಿಯೂ ರಪ್ಪ ಚಾಲನೆ ನೀಡಿದರು.ಈ ವೇಳೆ ಮಾತನಾಡಿದ ಅವರು,ಬೆಂಗಳೂರಿನ ನಾಲ್ಕು ವಿಭಾಗಗಳಿಯೂ ಮೊಬೈಲ್ ಫೀವರ್ ಕ್ಲಿನಿಕ್ ಸಂಚಾರ ಮಾಡಲಿದ್ದು, ಈಗಾಗಲೇ ಮೈಸೂರು, ಮಂಗಳೂರಲ್ಲಿ ಈ ಮೊಬೈಲ್ ಫೀವರ್ ಕ್ಲಿನಿಕ್ ಕಾರ್ಯ ನಿರ್ವಹಿಸುತ್ತಿವೆ ಎಂದು ತಿಳಿಸಿದರು.ನಾಲ್ಕು ಬಸ್‌ಗಳಲ್ಲಿ ಸಂಚಾರ ಮಾಡಲಿರುವ ಮೊಬೈಲ್ ಫೀವರ್ ಕ್ಲಿನಿಕ್‌ಗಳಲ್ಲಿ ಯಾರಿಗಾದರೂ ಅನಾರೋಗ್ಯ ಕಂಡುಬಂದರೆ ಇಲ್ಲಿ ಸಂಪರ್ಕಿಸಿದರೆ ಸೂಕ್ತ ಚಿಕಿತ್ಸೆ ನೀಡಲಾಗುತ್ತದೆ ಎಂದು ಹೇಳಿದರು.ದೇಶದಲ್ಲಿ ಮೂರು ಹಂತಗಳ ಲಾಕ್‌ಡೌನ್ ವಿಧಿಸಿದರೂ ಡೆಡ್ಲಿ ಕೋವಿಡ್-19 ವೈರಾಣು ಸೋಂಕು ನಿಯಂತ್ರಣಕ್ಕೆ ಬರುತ್ತಿಲ್ಲ.ಪ್ರಧಾನ ನರೇಂದ್ರ ಮೋದಿ ಮುಂದಿನ ಮಾರ್ಗೋಪಾಯಗಳ ಬಗ್ಗೆ ವಿಡಿಯೋ ಸಂವಾದ ನಡೆಸಲಿದ್ದಾರೆ.ಅಲ್ಲಿ ನಮ್ಮ ನಿಲುವುವನ್ನು ಅಲ್ಲಿ ಪ್ರಸ್ತಾಪಿಸುತ್ತೇವೆ. ಪ್ಯಾಕೇಜ್‌ಗೆ ಬೇಡಿಕೆ ಇಡುವ ಬಗ್ಗೆಯೂ ಚರ್ಚಿಸಲಾಗುವುದು ಎಂದು ಅವರು ತಿಳಿಸಿದರು.ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಲಕ್ಷ್ಮಣ ಸವದಿ, ಸಂಸದ ತೇಜಸ್ವಿಸೂರ್ಯ ಉಪಸ್ಥಿತರಿದ್ದರು.

### ಬಿ.ಎ.ಬಸವರಾಜ ಅವರು ಜಿಲ್ಲೆಗೆ ಆಗಮನ

ಬಳ್ಳಾರಿ,-ನಗರಾಭಿವೃದ್ಧಿ ಸಚಿವರಾದ ಬಿ.ಎ.ಬಸವರಾಜ ಅವರು ಮೇ 11 ಮತ್ತು 12 ರಂದು ಎರಡು ದಿನಗಳ ಕಾಲ ಬಳ್ಳಾರಿ ಜಿಲ್ಲೆ ಪ್ರವಾಸ ಕೈಗೊಂಡಿದ್ದಾರೆ ಎಂದು ಸಚಿವರ ವಿಶೇಷ ಕರ್ತವ್ಯಾಧಿಕಾರಿಗಳು ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ. ಸಚಿವರು ಮೇ 11 ರಂದು ರಾತ್ರಿ ಆಗಮಿಸಿ ವಾಸ್ತವ್ಯ ಹೂಡಲಿದ್ದಾರೆ.ಮೇ 12 ರಂದು ಬೆಳಗ್ಗೆ 10.30ಕ್ಕೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಹಾನಗರಪಾಲಿಕೆ ವ್ಯಾಪ್ತಿಯ ಅಭಿವೃದ್ಧಿ ಕಾರ್ಯಗಳ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ. ಅಪರಾಹ್ನ 12 ಕ್ಕೆ ನಗರದ ಬುಡಾ ಸಭಾಂಗಣದಲ್ಲಿ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯ ಅಭಿವೃದ್ಧಿ ಕಾರ್ಯಗಳ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ.

### ಕೋವಿಡ್-19: ಜಿಲ್ಲಾ ಉಸ್ತುವಾರಿ ಸಚಿವ ಜಗದೀಶ್ ಶೆಟ್ಟರ್ ಸಭೆ

# ಗಡಿ ಪ್ರವೇಶಿಸುವ ಜನರನ್ನು ಅವರ ಜಿಲ್ಲೆಗಳಿಗೆ ಕಳುಹಿಸಲು ನಿರ್ದೇಶನ

ಬೆಳಗಾವಿ, ಮೇ.11 ನೆರೆಯ ರಾಜ್ಯದಿಂದ ಬೆಳಗಾವಿ ಜಿಲ್ಲೆಗೆ ಆಗಮಿಸುವ ಜನರನ್ನು ತಪಾಸಣೆ ನಡೆಸಿದ ಬಳಿಕ ಅವರನ್ನು ಸಂಬಂಧಿಸಿದ ಜಿಲ್ಲೆಗಳಲ್ಲಿ ಕ್ವಾರಂಟೈನ್ ಮಾಡುವ ಅಗತ್ಯವಿದೆ ಎಂದು ಈಗಾಗಲೇ ಮುಖ್ಯ ಕಾರ್ಯದರ್ಶಿಗಳ ಗಮನಕ್ಕೆ ತರಲಾಗಿದೆ. ಆದ್ದರಿಂದ ಗಡಿ ಜಿಲ್ಲೆ ಬೆಳಗಾವಿಗೆ ಆಗಮಿಸುವ ಇತರೆ ಜಿಲ್ಲೆಯ ಜನರನ್ನು ಆಯಾ ಜಿಲ್ಲೆಯ ನೋಡಲ್ ಅಧಿಕಾರಿಗಳ ಮೂಲಕ ಕಳಿಸಿಕೊಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಜಗದೀಶ್ ಶೆಟ್ಟರ್ ತಿಳಿಸಿದರು.

ಕೋವಿಡ್-19 ನಿಯಂತ್ರಣಕ್ಕೆ ಸಂಬಂಧಿಸಿದಂತೆ ನಗರದ ಪ್ರವಾಸಿಮಂದಿರದ ಆವರಣದಲ್ಲಿ ಸೋಮವಾರ (ಮೇ 11) ನಡೆದ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಬೇರೆ ರಾಜ್ಯಗಳಲ್ಲಿ ಮೃತಪಟ್ಟಿರುವವರನ್ನು ರಾಜ್ಯಕ್ಕೆ ಕರೆತರದೇ ಆಯಾ ರಾಜ್ಯಗಳಲ್ಲಿಯೇ ಅಂತ್ಯಕ್ರಿಯೆ ನಡೆಸಬೇಕು ಎಂದು ರಾಜ್ಯ ಸರ್ಕಾರ ಈಗಾಗಲೇ ಸ್ಪಷ್ಟಪಡಿಸಿದೆ ಎಂದು ತಿಳಿಸಿದರು.

ಹೆಚ್ಚು ಹೆಚ್ಚು ಪ್ರಕರಣಗಳು ವರದಿಯಾಗಿದ್ದರೂ ಕೂಡ ಸುದೈವದಿಂದ ಜೀವಹಾನಿ ಪ್ರಮಾಣ ಕಡಿಮೆಯಾಗಿದೆ. ಇದುವರೆಗೆ ವೆಂಟಿಲೇಟರ್ ಬಳಕೆ ಹಂತಕ್ಕೆ ಪರಿಸ್ಥಿತಿ ತಲುಪಿಲ್ಲ ಎಂದರು.

ಸೋಂಕಿತರಿಗೆ ಸೂಕ್ತ ವೈದ್ಯಕೀಯ ಚಿಕಿತ್ಸೆ ನೀಡಿ ನೆಗೆಟಿವ್ ಬಂದ ಬಳಿಕ ಅವರಲ್ಲಿ ಆತ್ಮಸ್ಥೈರ್ಯ ಮೂಡಿಸಿದ ಬಳಿಕ ಮನೆಗೆ ಕಳಿಸಬೇಕು ಎಂದರು.

(2ನೇ ಪುಟಕ್ಕೆ)



## ಜಿಲ್ಲೆಯಲ್ಲಿ ಈವರೆಗೆ 50 ಕೊರೋನಾ ಸೋಂಕಿತರು ದೃಢ : 33 ಜನರು ಗುಣಮುಖರಾಗಿ ಆಸ್ಪತ್ರೆಯಿಂದ ಬಿಡುಗಡೆ

ವಿಜಯಪುರ ಮೇ.11: ಜಿಲ್ಲೆಯಲ್ಲಿ ಈವರೆಗೆ 50 ಕೋವಿಡ್ -19 ಪಾಸಿಟಿವ್ ಪ್ರಕರಣಗಳು ದೃಢಪಟ್ಟಿದ್ದು, ಈವರೆಗೆ ಒಟ್ಟು 33 ಜನ ಕೋವಿಡ್-19 ರೋಗಿಗಳು ಗುಣಮುಖರಾಗಿ ಆಸ್ಪತ್ರೆಯಿಂದ ಬಿಡುಗಡೆಗೊಂಡಿದ್ದಾರೆ ಎಂದು ಜಿಲ್ಲಾಧಿಕಾರಿ ವೈ.ಎಸ್ ಪಾಟೀಲ ಅವರು ತಿಳಿಸಿದ್ದಾರೆ.



ಇಂದು ದಿನಾಂಕ 11-05-2020 ರಂದು ಒಬ್ಬರಿಗೆ ಕೋವಿಡ್ ಸೋಂಕು ತಗಲಿದ್ದು ರೋಗಿ ಸಂಖ್ಯೆ - 856 (20 ವರ್ಷದ ಮಹಿಳೆ) ಇವರು ರೋಗಿ ಸಂಖ್ಯೆ - 511 ಇವರ ಸಂಪರ್ಕದಿಂದ ಸೋಂಕು ತಗುಲಿದ್ದು, ಕಂಟೇನ್ಮೆಂಟ್ ವಲಯ ವ್ಯಾಪ್ತಿಯಿಂದ ಸೋಂಕು ತಗುಲಿರುವ ಬಗ್ಗೆ ದೃಢಪಟ್ಟಿದೆ. ನಗರದ ನಿಗದಿತ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಈವರೆಗೆ ವಿದೇಶ ಸೇರಿದಂತೆ ಇತರ ಪ್ರದೇಶಗಳಿಂದ 2153 ಜನರು ಬಂದ ಬಗ್ಗೆ ವರದಿಯಾಗಿದ್ದು, ಇವರ ಮೇಲೆ ತೀವ್ರ ನಿಗಾ ಇಡಲಾಗಿದೆ. 637 ಜನರು 28 ದಿನಗಳ ಐಸೋಲೇಶನ್ ಅವಧಿ ಪೂರ್ಣಗೊಳಿಸಿದ್ದಾರೆ. 1480 ಜನರು

(2ನೇ ಪುಟಕ್ಕೆ)

## ಸರಿಯಾಗಿ ಮೆಡಿಕಲ್ ಚೆಕ್‌ಅಪ್ ಮಾಡದೆ ಕಳಿಸಿದ್ದು ದೊಡ್ಡ ತಪ್ಪು: ಸಚಿವ ಜಗದೀಶ್ ಶೆಟ್ಟರ್

ಬೆಳಗಾವಿ :ಒಂದು ರಾಜ್ಯದಿಂದ ಇನ್ನೊಂದು ರಾಜ್ಯಕ್ಕೆ ಕಳಿಸುವಾಗ ಸರಿಯಾಗಿ ಮೆಡಿಕಲ್ ಚೆಕ್‌ಅಪ್ ಮಾಡದೆ ಕಳಿಸಿದ್ದು ದೊಡ್ಡ ತಪ್ಪು ಎಂದು ಸಚಿವ ಜಗದೀಶ್ ಶೆಟ್ಟರ್ ಹೇಳಿದ್ದಾರೆ .

ಬೆಳಗಾವಿಯಲ್ಲಿಂದು ಮಾಧ್ಯಮದವರ ಜತೆಗೆ ಮಾತನಾಡಿದ ಅವರು ಅಜ್ಮೀರ ಕ್ಕೆ ಹೋಗಿ ವಾಪಸ್ ಬರುವಾಗ ಅವರನ್ನು ಸರಿಯಾಗಿ ತಪಾಸಣೆ ಮಾಡಿಸದೆ ಕರ್ನಾಟಕಕ್ಕೆ ಕಳಿಸಿದ್ದು ರಾಜಸ್ಥಾನ ಅಧಿಕಾರಿಗಳು ತಪ್ಪು ಎಂದವರು ಅಸಮಾಧಾನ ವ್ಯಕ್ತಪಡಿಸಿದರು .

ಬೆಳಗಾವಿ ಜಿಲ್ಲೆ ಕೊರೊನಾದಿಂದ ಜಿರೋ ಆಗಿರಬೇಕಿತ್ತು. ಆದ್ರೆ ದೆಹಲಿ ತಬ್ಲಿಘಿಗಳಿಂದ ಸೋಂಕಿತರ ಸಂಖ್ಯೆ ಹೆಚ್ಚಾಗಿತ್ತು. ಈಗ ಅಜ್ಮೀರ್‌ಗೆ ಹೋಗಿದ್ದವರಿಂದ ಮತ್ತೆ ತಲೆ ನೋವು ಶುರುವಾಗಿದ್ದು. ಮತ್ತೆ 22 ಸೋಂಕಿತರು ಹೆಚ್ಚಾಗಿದ್ದಾರೆ ಎಂದು ಉಸ್ತುವಾರಿ ಸಚಿವ ಜಗದೀಶ ಶೆಟ್ಟರ್ ಕಳವಳ ವ್ಯಕ್ತಪಡಿಸಿದರು.

ರಾಜಸ್ಥಾನದ ಅಜ್ಮೀರ್‌ನಿಂದ ಬೆಳಗಾವಿಗೆ ಬಂದ 30 ಜನರಿಗೆ ಕೊರೊನಾ ಸೋಂಕು ಕಂಡು ಬಂದಿರುವ ಹಿನ್ನೆಲೆ ಜಿಲ್ಲಾ ಉಸ್ತುವಾರಿ ಸಚಿವ ಜಗದೀಶ ಶೆಟ್ಟರ್ ಅಧಿಕಾರಿಗಳೊಂದಿಗೆ ಸೋಮವಾರ ಬೆಳಗಾವಿಯ ಪ್ರವಾಸಿ ಮಂದಿರದಲ್ಲಿ ತುರ್ತು ಸಭೆ ನಡೆಸಿದರು.ಈ ರೀತಿ ಸರಿಯಾಗಿ ತಪಾಸಣೆ ಮಾಡಿಸದೇ ಕಳಿಸಿರುವುದು ದೊಡ್ಡ ತಪ್ಪು. ನಮಗೆ ಬಂದ ಮಾಹಿತಿಯನ್ನು ಬೇರೆ ರಾಜ್ಯಗಳಿಗೆ ತಿಳಿಸಲಾಗುವುದು. ಅಲ್ಲಿನ ಸರ್ಕಾರಗಳು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುತ್ತವೆ ಎಂದು ಸಚಿವ ಜಗದೀಶ ಶೆಟ್ಟರ್ ಸ್ಪಷ್ಟಪಡಿಸಿದರು.

ಸಭೆಯಲ್ಲಿ ಸಚಿವೆ ಶಶಿಕಲಾ ಜೊಲ್ಲೆ, ಕೇಂದ್ರ ಸಚಿವ ಸುರೇಶ್ ಅಂಗಡಿ, ಸಂಸದ ಅಣ್ಣಾಸಾಹೇಬ್ ಜೊಲ್ಲೆ, ರಾಜ್ಯಸಭಾ ಸದಸ್ಯ ಡಾ.ಪ್ರಭಾಕರ್ ಕೋರೆ, ಶಾಸಕರಾದ ಅಭಯ ಪಾಟೀಲ್, ಅನಿಲ್ ಬೆನಕೆ, ಡಿಸಿ ಎಸ್.ಬಿ.ಬೊಮ್ಮನಹಳ್ಳಿ ಸೇರಿ ಹಲವು ಅಧಿಕಾರಿಗಳು ಭಾಗಿಯಾಗಿದ್ದರು.

## ಜಿಲ್ಲೆಯ ಗ್ರಾಮೀಣ ಪ್ರದೇಶ ಮನೆ- ಸಾರ್ವಜನಿಕ ಕಟ್ಟಡಗಳಿಗೆ ನಳನೀರು ಕಲ್ಪಿಸುವ ಜಲ ಜೀವನ ಯೋಜನೆಯಡಿ ರಾಜ್ಯ ಸರ್ಕಾರಕ್ಕೆ 56205.54 ಲಕ್ಷ ರೂ.ಗಳ ಕ್ರಿಯಾಯೋಜನೆ ಮಂಜೂರಾತಿಗೆ ಸಲ್ಲಿಸಲು ನಿರ್ಧಾರ

ವಿಜಯಪುರ.ಮೇ.11: ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿನ ಎಲ್ಲ ಮನೆಗಳು ಮತ್ತು ಸಾರ್ವಜನಿಕ ಕಟ್ಟಡಗಳಿಗೆ ನೀರಿನ ನಳಗಳ ಸಂಪರ್ಕ ಕಲ್ಪಿಸುವ ಜಲ ಜೀವನ ಯೋಜನೆಯಡಿ ಒಟ್ಟು 56205. 54 ಲಕ್ಷ ರೂ.ಗಳ ಕ್ರಿಯಾಯೋಜನೆ ಮಂಜೂರಾತಿಗಾಗಿ ರಾಜ್ಯ ಸರ್ಕಾರಕ್ಕೆ ಸಲ್ಲಿಸಲು ನಿರ್ಧರಿಸಲಾಗಿದೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಗೋವಿಂದ ರೆಡ್ಡಿ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಕುರಿತು ನಡೆದ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಕೇಂದ್ರ ಹಾಗೂ ರಾಜ್ಯ ಪುರಸ್ಕೃತ ಜಲ ಜೀವನ ಯೋಜನೆಯಡಿ 2020ರಿಂದ 2024ರವರೆಗೆ ಜಿಲ್ಲೆಯ ಎಲ್ಲ ಮನೆಗಳು, ಶಾಲೆ, ಅಂಗನವಾಡಿ ಕೇಂದ್ರ, ವಸತಿ ನಿಲಯ ಹಾಗೂ ಆರೋಗ್ಯ ಕೇಂದ್ರಗಳಿಗೆ ಕಾರ್ಯಾತ್ಮಕ ನಳನೀರು ಕಲ್ಪಿಸುವ ಉದ್ದೇಶ ಹೊಂದಲಾಗಿದ್ದು, ಈಗಾಗಲೇ ತಾಲೂಕಾವಾರು ಮತ್ತು ಜಿಲ್ಲೆಯ ಕ್ರಿಯಾಯೋಜನೆ ಸಿದ್ಧಪಡಿಸಲಾಗಿದೆ.

ಈ ಕ್ರಿಯಾ ಯೋಜನೆಯಡಿ ಜಿಲ್ಲೆಯ ಐದು ತಾಲೂಕುಗಳ 353658 ಮನೆಗಳಿಗೆ, 3.28 ಲಕ್ಷ ನಳಗಳ ಸಂಪರ್ಕಕ್ಕಾಗಿ 56205.54 ಲಕ್ಷ ರೂ.ಗಳ ಕ್ರಿಯಾ ಯೋಜನೆ ಸಿದ್ಧಪಡಿಸಿದ್ದು, ರಾಜ್ಯ ಸರ್ಕಾರದ ಮಂಜೂರಾತಿಗೆ ಸಲ್ಲಿಸಲು ನಿರ್ಧರಿಸಲಾಯಿತು.

ಸಭೆಯಲ್ಲಿ ಮಾತನಾಡಿದ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗೋವಿಂದ ರೆಡ್ಡಿಯವರು ಮುಂಬರುವ ದಿನಗಳಲ್ಲಿ ಜಲಧಾರೆ ಹಾಗೂ ಜಲ ಜೀವನ ಮಿಷನ್ ಯೋಜನೆಯಡಿ ಪ್ರತಿ ಮನೆಗೆ ನೀರಿನ ಸೌಲಭ್ಯ ದೊರೆಯಲಿದೆ.

ಕೇಂದ್ರ ಸರ್ಕಾರದ ಮತ್ತು ರಾಜ್ಯ ಸರ್ಕಾರಗಳಿಂದ ತಲಾ ಶೇ, 45 ರಷ್ಟು ಅನುದಾನ ಮತ್ತು ಗ್ರಾಮ ಪಂಚಾಯತಗಳಿಂದ ಶೇ. 10 ರಷ್ಟು ಅನುದಾನದಡಿ ಈ ಯೋಜನೆ ಜಾರಿಯಾಗಲಿದ್ದು,

ಜಿಲ್ಲೆಯ 213 ಗ್ರಾಮ ಪಂಚಾಯತ ವ್ಯಾಪ್ತಿಯ 629 ಗ್ರಾಮಗಳ ಎಲ್ಲ ಮನೆ, ಶಾಲೆ, ಅಂಗನವಾಡಿ ಕೇಂದ್ರ, ವಸತಿ ನಿಲಯ ಹಾಗೂ ಆರೋಗ್ಯ ಕೇಂದ್ರಗಳಿಗೆ ಕಾರ್ಯಾತ್ಮಕ



ನಳನೀರು ಸಂಪರ್ಕ ಕಲ್ಪಿಸುವ ಯೋಜನೆ ಹೊಂದಲಾಗಿದೆ ಎಂದು ಅವರು ಹೇಳಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರಾದ ಶ್ರೀ ಎಸ್.ಕುಮಾರ್ ಅವರು ಮಾತನಾಡಿ ಐದು ವರ್ಷಗಳ ಅವಧಿಯಲ್ಲಿ ಜಿಲ್ಲೆಯ ಗ್ರಾಮೀಣ ಪ್ರದೇಶಗಳ ಮನೆಗಳಿಗೆ, ಮತ್ತು ಸಾರ್ವಜನಿಕರ ಕಟ್ಟಡಗಳಿಗೆ ಶುದ್ಧ ನೀರು ಕಲ್ಪಿಸುವ ಯೋಜನೆ ಇದಾಗಿದೆ. ವಿವಿಧ ಗ್ರಾಮ ಪಂಚಾಯತ ವ್ಯಾಪ್ತಿಗಳ 1035 ಜನವಸತಿಗಳಿಗೆ ನೀರು ಕಲ್ಪಿಸುವ ಉದ್ದೇಶ ಹೊಂದಲಾಗಿದೆ.

ಈ ಯೋಜನೆಯಿಂದ ಯಾವುದೇ ಮನೆ ಬಿಟ್ಟು ಹೋಗದಂತೆ ಮುನ್ನೆಚ್ಚರಿಕೆಯೊಂದಿಗೆ ಕ್ರಿಯಾಯೋಜನೆ ರೂಪಿಸಲಾಗಿದ್ದು, ಮಂಜೂರಾತಿಗಾಗಿ ಸರ್ಕಾರಕ್ಕೆ ಸಲ್ಲಿಸಲಾಗುತ್ತಿದೆ ಎಂದು ಹೇಳಿದರು.

ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಅಭಿಯಂತರರು ಉಪಸ್ಥಿತರಿದ್ದರು.

## ಕೋವಿಡ್ -19 ನಿಯಂತ್ರಣ : ಜಿಲ್ಲಾಡಳಿತ ಕ್ರಮಕ್ಕೆ ಮೆಚ್ಚುಗೆ



ಗದಗ.ಮೇ 11 : ಗದಗ ಜಿಲ್ಲೆಯಲ್ಲಿ ಕೋವಿಡ್ -19 ಸೋಂಕು ನಿಯಂತ್ರಣ ಸಂದರ್ಭದಲ್ಲಿ ಆರೋಗ್ಯ ಇಲಾಖೆಯ ಸಂಗ್ರಹಿಸಿದ ದತ್ತಾಂಶಗಳನ್ನು ಸುಲಭವಾಗಿ ಅಗತ್ಯತೆಗೆ ತಕ್ಕಂತೆ ಉಪಯೋಗಿಸಲು ಬರುವಂತೆ ಸಂಗ್ರಹದಲ್ಲಿಟ್ಟುಕೊಳ್ಳಬೇಕೆಂದು ರಾಜ್ಯದ ಸರ್ವ ಶಿಕ್ಷಣ ಅಭಿಯಾನದ ಯೋಜನಾ ನಿರ್ದೇಶಕ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ಟಿ. ರೇಜು ಅವರು ಸೂಚನೆ ನೀಡಿದರು.

ಗದಗ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಕೋವಿಡ್ -19 ಸೋಂಕು ನಿಯಂತ್ರಣದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೋವಿಡ್ 19 ರ ಸೋಂಕಿನ ನಿಯಂತ್ರಣ ಕುರಿತಂತೆ ದತ್ತಾಂಶ ಸಂಗ್ರಹಣೆಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳು ವಿವಿಧ ಆ್ಯಪ್ ಗಳನ್ನು ಬಿಡುಗಡೆ ಮಾಡುತ್ತಿದ್ದು ಅವುಗಳಿಗೆ ಆರೋಗ್ಯ ಇಲಾಖೆಯು ಸಂಗ್ರಹಿಸಿದ ದತ್ತಾಂಶಗಳನ್ನು ಅವುಗಳಿಗೆ ಅಪ್ ಲೋಡ್ ಮಾಡಲು ಅನುಕೂಲವಾಗುವ ರೀತಿಯಲ್ಲಿ ದತ್ತಾಂಶ ಸಂಗ್ರಹಣೆ ಆಗಬೇಕು. ಜಿಲ್ಲೆಗೆ ಹೊರಗಿನಿಂದ ಬರುವ ವಲಸೆ ಕಾರ್ಮಿಕರಿಗೆ ಮಹಾತ್ಮಾ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸವನ್ನು ಕೊಡುವಂತೆ ಗ್ರಾಮ ಪಂಚಾಯತಿ ಟಾಸ್ಕ್ ಪೋರ್ಸ ಸಮಿತಿ ಕ್ರಮ ಜರುಗಿಸಬೇಕು. ಹೊರ ಜಿಲ್ಲೆಗಳ ಕಾರ್ಮಿಕರಿಗೆ ಊಟ ಹಾಗೂ ದಿನಸಿ ನೀಡುವ ಕುರಿತು ಕ್ರಮ ವಹಿಸಬೇಕು. ಎಲ್ಲ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಹಾಗೂ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಮುಖಕ್ಕೆ ಮಾಸ್ಕ್ ಕಡ್ಡಾಯವಾಗಿ ಇರುವಂತೆ ಮತ್ತು ಮಾಸ್ಕ್ ಹಾಕಿಕೊಳ್ಳದವರಿಗೆ ಸರ್ಕಾರದಿಂದ ನಿರ್ದೇಶಿತ ದಂಡವನ್ನು ವಿಧಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಿಳಿಸಿದರು.

ಗದಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ

(5ನೇ ಪುಟಕ್ಕೆ )

## ಕೋಳೂರಿನಲ್ಲಿ ನರೇಗಾ ಕಾಮಾಗಾರಿಗೆ ಚಾಲನೆ



ಕೊಪ್ಪಳ ಮೇ. 11 : ಕೊಪ್ಪಳ ತಾಲೂಕಿನ ಕೋಳೂರು ಗ್ರಾಮದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ, ಗ್ರಾಮದ ಕೆರೆ ಹೂಳೆತ್ತುವ ಕಾಮಗಾರಿಗೆ ಗ್ರಾಮ ಪಂಚಾಯತ ಅಧ್ಯಕ್ಷೆ ಶಿವಮ್ಮ ಗಾಳೆಪ್ಪ ಪೂಜಾರ ಭೂಮಿ ಪೂಜೆ ಮಾಡುವುದರ ಮೂಲಕ ಚಾಲನೆ ನೀಡಿದರು.

ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ಸರ್ಕಾರದ ಸುತ್ತೋಲೆಗಳಿಗೆ ನಾವೆಲ್ಲರೂ ಬದ್ಧರಾಗಿ ಯೋಜನೆಯಲ್ಲಿ ಭಾಗವಹಿಸಬೇಕು. ಕೂಲಿಕಾರರು ಕೂಲಿ ಕೆಲಸ ನಿರ್ವಹಿಸಿ ಪ್ರತಿ ದಿನಕ್ಕೆ ರೂ.275/- ಪಡೆಯುವ ಮೂಲಕ ಗ್ರಾಮದ ಅಭಿವೃದ್ದಿಗೆ ಕಂಕಣಬದ್ಧರಾಗಿ ನಿಲ್ಲಬೇಕು ಎಂದು ಹೇಳಿದರು.

ನರೇಗಾ ಯೋಜನೆಯಡಿ ಫಾರಂ.ಸಂ-6 ಕೊಟ್ಟಂತಹ 400 ಜನ ಕೂಲಿಕಾರರಿಗೆ ಕೆಲಸವನ್ನು ನೀಡಲಾಯಿತು.

ಕಾಮಗಾರಿ ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ನೆರಳಿನ ವ್ಯವಸ್ಥೆ, ಕೂಲಿಕಾರರಿಗೆ ಹ್ಯಾಂಡ್ ಸ್ಯಾನಿಟೈಜರ್ ವ್ಯವಸ್ಥೆ, ಮಾಸ್ಕ್ ವ್ಯವಸ್ಥೆಯನ್ನು ಮಾಡಲಾಯಿತು. ಈ ಸಂದರ್ಭ ಪಂಚಾಯತ ಅಭಿವೃದ್ಧಿ ಅಧಿಕಾರಿ ಬಸವರಾಜ ಕಿರದಿ, ನರೇಗಾ ತಾಂತ್ರಿಕ ಸಹಾಯಕರು, ಕಾರ್ಯದರ್ಶಿ ಮರಿಯಪ್ಪ ಮಡಿವಾಳರ, ಗ್ರಾಮ ಪಂಚಾಯತಿ ಸಿಬ್ಬಂದಿ ಹಾಗೂ ಗಾಳೆಪ್ಪ ಪೂಜಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪಡಿತರ ಅಕ್ಕಿಯ ಅಕ್ರಮ ದಾಸ್ತಾನು ಕುರಿತು ಆಯಾ ಜಿಲ್ಲಾಧಿಕಾರಿಗಳಿಂದ ತನಿಖೆ : ಸಚಿವ ಗೋಪಾಲಯ್ಯ

ಬೆಂಗಳೂರು,ಮೇ 11- ಕಲಬುರಗಿ, ಮೈಸೂರು ಹಾಗೂ ದಾವಣಗೆರೆ ಜಿಲ್ಲೆಯಲ್ಲಿ ಅಕ್ರಮವಾಗಿ ದಾಸ್ತಾನು ಮಾಡಲಾಗಿದ್ದ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದ್ದು, ಆಯಾ ಜಿಲ್ಲಾಧಿಕಾರಿಗಳಿಂದ ತನಿಖೆ ನಡೆಸಲಾಗುವುದು ಎಂದು ಸಚಿವ ಕೆ.ಗೋಪಾಲಯ್ಯ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲಬುರಗಿಯಲ್ಲಿ ತಮ್ಮ ಇಲಾಖೆಯ ಅಧಿಕಾರಿಗಳು ಹಾಗೂ ಪೊಲೀಸರು ಒಂದೂವರೆ ಸಾವಿರ ಕ್ವಿಂಟಾಲ್ ಅಕ್ಕಿಯನ್ನು ವಶಪಡಿಸಿಕೊಂಡಿದ್ದು, ಅಕ್ರಮವಾಗಿ ದಾಸ್ತಾನು ಮಾಡಿದ್ದ ಅಂಗಡಿ ಮಾಲೀಕರ ವಿರುದ್ದ ಕ್ರಿಮಿನಲ್ ಕೇಸ್ ದಾಖಲಿಸಿ ಜಿಲ್ಲಾಧಿಕಾರಿಗಳ ತನಿಖೆಗೆ ಆದೇಶಿಸಲಾಗಿದೆ ಎಂದು ಹೇಳಿದರು.

ಗುಲ್ಬರ್ಗದಲ್ಲಿ 1500 ಚೀಲ ಅಕ್ಕಿ, 135 ಚೀಲ ತೊಗರಿ ಕಾಳು ವಶಪಡಿಸಿಕೊಳ್ಳಲಾಗಿದೆ. ಮೈಸೂರಿನಲ್ಲಿ 697 ಕ್ವಿಂಟಾಲ್ ಅಕ್ಕಿಯನ್ನು ವಶಕ್ಕೆ ಪಡೆಯಲಾಗಿದೆ. ಆ ಅಕ್ಕಿ ಎಂಡಿಸಿಸಿ ಸಗಟು ಕೇಂದ್ರಕ್ಕೆ ಸಂಬಂಧಪಟ್ಟಿದ್ದಾಗಿದ್ದು, ಕ್ರಿಮಿನಲ್ ಪ್ರಕರಣ ದಾಖಲಿಸಿ ತನಿಖೆಗೆ ನಡೆಸುವಂತೆ ಆದೇಶಿಸಲಾಗಿದೆ ಎಂದರು.ದಾವಣಗೆರೆಯಲ್ಲಿ 400 ಕ್ವಿಂಟಾಲ್ ಅಕ್ಕಿ ವಶಪಡಿಸಿಕೊಳ್ಳಲಾಗಿದ್ದು, ಯಾರಿಗೆ ಸಂಬಂಧಪಟ್ಟಿದ್ದು ಎಂಬುದು ಇನ್ನು ದೃಢಪಟ್ಟಿಲ್ಲ. ಇಲ್ಲೂ ಕೂಡ ಕ್ರಿಮಿನಲ್ ಕೇಸ್ ದಾಖಲಿಸಿ ತನಿಖೆಗೆ ಆದೇಶಿಸಲಾಗಿದೆ ಎಂದು ಹೇಳಿದರು. ಸಹಾಯ ಧನದಲ್ಲಿ ನೀಡಿದ್ದ ಪಡಿತರ ಅಕ್ಕಿಯನ್ನು 10-12 ರೂನಂತೆ ಮಾರಾಟ ಮಾಡುತ್ತಿರುವುದು ಗಮನಕ್ಕೆ ಬಂದಿದೆ. ಉಚಿತವಾಗಿ ನೀಡುವಂತಹ ಅಕ್ಕಿಯನ್ನು ಸರ್ಕಾರ 25 ರೂ. ಕೊಟ್ಟು ಖರೀದಿಸುತ್ತದೆ. ಆ ಅಕ್ಕಿ ಪಡೆಯುವಂತಹ ಪಡಿತರಚೀಟಿದಾರರು 10-12 ರೂ.ಗೆ ಮಾರಾಟ ಮಾಡುತ್ತಿರುವುದನ್ನು ತಡೆಯಬೇಕಿದೆ. ಇದಕ್ಕೆ ಸಂಬಂಧಿಸಿದಂತೆ ಸೂಕ್ತ ಮಾರ್ಪಾಡು ತರಲಾಗುವುದು ಎಂದು ತಿಳಿಸಿದರು.

## ಅಕಾಲಿಕ ಮಳೆಯಿಂದ ಮೃತಪಟ್ಟವರ ಕುಟುಂಬಗಳಿಗೆ ಹೆಬ್ಬಾಳಕರ್ ಸಾಂತ್ವನ, ಧನಸಹಾಯ



ಬೆಳಗಾವಿ - ಭಾನುವಾರ ಸುರಿದ ಮಳೆಯಿಂದಾಗಿ ಕಮಕಾರಟ್ಟಿ ಗ್ರಾಮದಲ್ಲಿ ನೆಲಗೋಡೆ ಕುಸಿತಕೊಂಡು ಮೃತಪಟ್ಟಿರುವ ಇಬ್ಬರ ಕುಟುಂಬಗಳನ್ನು ಇಂದು ಭೇಟಿ ಮಾಡಿದ ಶಾಸಕಿ ಲಕ್ಷ್ಮಿ ಹೆಬ್ಬಾಳಕರ್ ಸಾಂತ್ವನ ಹೇಳುವ ಜೊತೆಗೆ ಧನಸಹಾಯ ಮಾಡಿದರು. ಕಲ್ಲಪ್ಪ ಸಿ ಸಾಂಬ್ರೆಕರ್ (ಕೊಂಡ ಸಕೊಪ್ಪ ನಿವಾಸಿ, 45 ವರ್ಷ) ಹಾಗೂ ಪರಶುರಾಮ ಗ ಶಹಪೂರಕರ್ (ಶಿಂದೋಳಿ ನಿವಾಸಿ, 17 ವರ್ಷ ) ಆಡುಗಳನ್ನು ಮೇಯಿಸುವ ಸಲುವಾಗಿ ಕಮಕಾರಟ್ಟಿ ಹೋಗಿದ್ದರು. ಮಧ್ಯಾಹ್ನ ಸುಮಾರು ಒಂದು ಗಂಟೆಗೆ ಸುರಿದ ಭಾರಿ ಮಳೆಯಿಂದಾಗಿ ಆಸರೆ ಬಯಸಿ ಮಳೆ ಯಿಂದ ತಮ್ಮನ್ನು ರಕ್ಷಿಸಿ ಕೊಳ್ಳಲು ಹೊಲದಲ್ಲಿನ ಶೆಡ್ ಹತ್ತಿರ ಹೋಗಿದ್ದಾರೆ. ಮಣ್ಣು ನಿರ್ಮಿತ ಗೋಡೆ ಇವರ ಮೇಲೆ ಕುಸಿದು ಬಿದ್ದ ಕಾರಣ ಇಬ್ಬರೂ ಸಾವನ್ನಪ್ಪಿದ್ದಾರೆ. ಸುದ್ದಿ ತಿಳಿದ ಲಕ್ಷ್ಮಿ ಹೆಬ್ಬಾಳಕರ್ ಮೃತರ ಮನೆಗಳಿಗೆ ತೆರಳಿ, ಕುಟುಂಬಗಳಿಗೆ ಸಾಂತ್ವನ ವನ್ನು ಹೇಳಿ ಧೈರ್ಯ ವನ್ನು ತುಂಬಿದರು. ಜೊತೆಗೆ ಧನ ಸಹಾಯವನ್ನೂ ಮಾಡಿದರು. ಸರಕಾರದಿಂದ ಸಾಧ್ಯವಾದಷ್ಟು ಆರ್ಥಿಕ ನೆರವು ಕೊಡಿಸಲು ಪ್ರಯತ್ನಿಸುವುದಾಗಿ ಅವರು ಭರವಸೆ ನೀಡಿದರು. ಹಿರೇಬಾಗೇವಾಡಿ ತಹಸಿಲ್ದಾರ ಕುಲಕರ್ಣಿ ಹಾಗೂ ಸಿಪಿಐ ಅಂಬಿಗೇರ್ ಇದ್ದರು.